ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

File No: DTE-ADMI0ACM2/12/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:03-10-2020.

-:: ಸುತ್ತೋಲೆ ::-

ವಿಷಯ: 2020-21ನೇ ಸಾಲಿನಲ್ಲಿ ಪೋಸ್ಟ್ ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಪ್ರವೇಶಾಧಿಸೂಚನೆ ದಿನಾಂಕ:02-09-2020.
2. ನಿರ್ದೇಶಕರು, ರಾಜೀವ್ ಗಾಂಧಿ ಇನ್ಸ್‌ಟಿಟ್ಯೂಟ್ ಆಫ್ ಸ್ಟೀಲ್ ಟೆಕ್ನಾಲಜಿ, ತೋರಣಗಲ್ಲು ಇವರ ಪತ್ರ 2020-21/13, ದಿ:11-09-2020.

-00000000-

2020-21ನೇ ಸಾಲಿಗೆ ಪೋಸ್ಟ್ ಡಿಪ್ಲೋಮಾ ಕೋರ್ಸುಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ಅಂತಿಮ ದಿ:26-09-2020 ಎಂದು ನಿಗಧಿಪಡಿಸಿ ದಿ:30-09-2020ರ ಒಳಗೆ ಪ್ರವೇಶಾತಿಯನ್ನು ನೀಡಲು ಉಲ್ಲೇಖ(1)ರ ಈ ಕಛೇರಿ ಪ್ರವೇಶಾಧಿಸೂಚನೆಯಲ್ಲಿ ನಿಗಧಿಪಡಿಸಲಾಗಿತ್ತು. ಉಲ್ಲೇಖ(1)ರ ಪತ್ರದಲ್ಲಿ ಪ್ರವೇಶ ಕೋರಿ ಕಡಿಮೆ ಅರ್ಜಿಗಳು ಸ್ವೀಕೃತವಾಗಿರುವುದರಿಂದ, ಇನ್ನು ಹೆಚ್ಚಿನ ಅರ್ಜಿಗಳು ಸ್ವೀಕೃತವಾಗುವ ಸಂಭವವಿರುವುದರಿಂದ, ಪ್ರವೇಶಾವಧಿಯನ್ನು ವಿಸ್ತರಿಸುವಂತೆ ಮನವಿ ಕೋರಿರುತ್ತಾರೆ.

ಈ ಸಂಬಂಧದಲ್ಲಿ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ **ಅರ್ಜಿ ವಿತರಿಸಲು ಹಾಗೂ ಸ್ವೀಕರಿಸಲು ಅಂತಿಮ ದಿ:20-10-2020 ರವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ **ದಿ:21-10-2020** ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರುಗಳು ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸತಕ್ಕದ್ದು. ಪ್ರಯುಕ್ತ, ಇದನ್ನು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.

ನಿರ್ದೇಶಕರು

ಗೆ,

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ.ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ
3. ಪ್ರಿನ್ಸಿಪಾಲರು, ಎಂ.ಎಸ್.ರಾಮಯ್ಯ ಪಾಲಿಟೆಕ್ನಿಕ್, ಬೆಂಗಳೂರು
4. ಪ್ರಿನ್ಸಿಪಾಲರು, ರಾಜೀವ್‌ಗಾಂಧಿ ಇನ್ಸ್‌ಟಿಟ್ಯೂಟ್ ಆಫ್ ಸ್ಟೀಲ್ ಟೆಕ್ನಾಲಜಿ, ತೋರಣಗಲ್, ಬಳ್ಳಾರಿ ಜಿಲ್ಲೆ.

ಸದರಿ ಸುತ್ತೋಲೆಯನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳಿಗೆ ಹಾಗೂ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸುವುದು ಹಾಗೂ ಸ್ಥಳೀಯ ದಿನಪತ್ರಿಕೆಗಳಲ್ಲಿ ಪ್ರಕಟಣೆ ನೀಡುವುದು.

ಪ್ರತಿ ಮಾಹಿತಿಗಾಗಿ:-

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
4. ಜಂಟಿ ನಿರ್ದೇಶಕರು(ಆಡಳಿತ), ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ-ಆಡಳಿತ ವಿಭಾಗಕ್ಕೆ – ಸದರಿ ಸುತ್ತೋಲೆಯನ್ನು ಅಂತರ್ಜಾಲದಲ್ಲಿ ಪ್ರಕಟಿಸುವುದು.
7. ಡಿವಿಪಿ(2) ವಿಭಾಗಕ್ಕೆ – ಮಾಹಿತಿಗಾಗಿ
8. ಕಛೇರಿ ಪ್ರತಿ.